# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 296 |
| ಸದಸ್ಯರ ಹೆಸರು | ಡಾ: ಎಂ. ಜಿ. ಮುಳೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 18-08-2026 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ ಜಿಲ್ಲೆ ಹುಮನಾಬಾದ್ ತಾಲ್ಲೂಕಿನ ಘಾಟಬೋರಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೈತರಿಗೆ ಕೃಷಿ ಇಲಾಖೆಯ ಸೇವೆಗಳು, ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಯಂತ್ರೋಪಕರಣಗಳು ಹಾಗೂ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಸ್ಥಳೀಯ ಮಟ್ಟದಲ್ಲೇ ಒದಗಿಸುವ ಉದ್ದೇಶದಿಂದ ನೂತನ ರೈತ ಸಂಪರ್ಕ ಕೇಂದ್ರ (RSK) ಸ್ಥಾಪಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಬೀದರ ಜಿಲ್ಲೆ ಹುಮನಾಬಾದ ತಾಲ್ಲೂಕು ಘಾಟಬೋರಳ ಗ್ರಾಮದಲ್ಲಿ ರೈತ ಸಂಪರ್ಕ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.<br>ಘಾಟಬೋರಳ ಗ್ರಾಮವು ಹುಮನಾಬಾದ ತಾಲ್ಲೂಕಿನ ದುಬಲಗುಂಡಿ ಕಂದಾಯ ಹೋಬಳಿಯ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಗೆ ಒಳಪಡುತ್ತದೆ. ಸದರಿ ರೈತ ಸಂಪರ್ಕ ಕೇಂದ್ರದ ಮೂಲಕ ರೈತರಿಗೆ ಕೃಷಿ ಇಲಾಖೆಯ ಸೇವೆಗಳು, ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಯಂತ್ರೋಪಕರಣಗಳು ಹಾಗೂ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |
| ಆ) | 371(ಜೆ) ವಿಶೇಷ ಅಭಿವೃದ್ಧಿ ಪ್ರದೇಶ ಹಾಗೂ ಗಡಿಭಾಗದ ಅತಿ ಹಿಂದುಳಿದ ಪ್ರದೇಶವಾಗಿರುವ ಘಾಟಬೋರಳ ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ರೈತರಿಗೆ ಅನುಕೂಲವಾಗುವಂತೆ ರೈತ ಸಂಪರ್ಕ ಕೇಂದ್ರ ಸ್ಥಾಪಿಸುವ ಕುರಿತು ಕೃಷಿ ಇಲಾಖೆ ಕೈಗೊಂಡಿರುವ ಆಡಳಿತಾತ್ಮಕ ಕ್ರಮಗಳು ಯಾವ ಹಂತದಲ್ಲಿವೆ; ಈ ಕುರಿತು ಸ್ಥಳ ಪರಿಶೀಲನೆ ಅಥವಾ ಕಾರ್ಯಸಾಧ್ಯತಾ ವರದಿ (Feasibility Report) ಸಿದ್ಧಪಡಿಸಲಾಗಿದೆಯೇ; | ಸರ್ಕಾರಿ ಆದೇಶ ಸಂಖ್ಯೆ:ಕೃತೋಇ 239 ಕೃಯೋಕಾ 99, ದಿನಾಂಕ: 29.06.2000ರಂತೆ ಪ್ರತಿ ಕಂದಾಯ ಹೋಬಳಿಗೆ ಒಂದರಂತೆ ರೈತ ಸಂಪರ್ಕ ಕೇಂದ್ರ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಆದೇಶದನ್ವಯ ಕಂದಾಯ ಹೋಬಳಿಗೊಂದರಂತೆ ದುಬಲಗುಂಡಿಯಲ್ಲಿ ರೈತ ಸಂಪರ್ಕ ಕೇಂದ್ರವು ಕಾರ್ಯನಿರ್ವಹಿಸುತ್ತಿದೆ. ಆದರನ್ವಯ ಹುಮನಾಬಾದ ತಾಲ್ಲೂಕಿನ ದುಬಲಗುಂಡಿ ಹೋಬಳಿಯ ಘಾಟಬೋರಳ ಗ್ರಾಮದಲ್ಲಿ ಹೊಸದಾಗಿ ರೈತ ಸಂಪರ್ಕ ಕೇಂದ್ರ ಆರಂಭಿಸಲು ಮೇಲಿನ ಸರ್ಕಾರಿ ಆದೇಶದನ್ವಯ ಅವಕಾಶವಿರುವುದಿಲ್ಲ. |

| | | |
|---|---|---|
| ಇ) | ನೂತನ ರೈತ ಸಂಪರ್ಕ ಕೇಂದ್ರ ಸ್ಥಾಪನೆಗಾಗಿ ಅಗತ್ಯವಿರುವ ಸರ್ಕಾರಿ ಜಮೀನು ಗುರುತಿಸುವಿಕೆ, ಕಟ್ಟಡ ನಿರ್ಮಾಣ, ಕೃಷಿ ಅಧಿಕಾರಿ ಹಾಗೂ ಸಿಬ್ಬಂದಿ ಹುದ್ದೆಗಳ ಮಂಜೂರಾತಿ, ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಹಾಗೂ 2026-27ನೇ ಸಾಲಿನ ರಾಜ್ಯ ಬಜೆಟ್ ಅಥವಾ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಅನುದಾನದಡಿ ಹಣ ಮೀಸಲಿಡುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅನ್ವಯಿಸುವುದಿಲ್ಲ. |
| ಈ) | ಘಾಟಬೋರಳ ಮತ್ತು ಸುತ್ತಮುತ್ತಲಿನ ಗ್ರಾಮಗಳ ರೈತರು ಕೃಷಿ ಇಲಾಖೆಯ ಸೇವೆಗಳಿಗಾಗಿ ಸುಮಾರು 25-30 ಕಿ.ಮೀ. ದೂರದ ಹುಮನಾಬಾದ್‌ಗೆ ತೆರಳಬೇಕಾಗಿರುವುದರಿಂದ ಸಮಯ ಮತ್ತು ಹಣದ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಯನ್ನು ನಿವಾರಿಸಲು ಪ್ರಸಕ್ತ ಸಾಲಿನಲ್ಲಿಯೇ ತಾತ್ಕಾಲಿಕ ಕಟ್ಟಡದಲ್ಲಾದರೂ ರೈತ ಸಂಪರ್ಕ ಕೇಂದ್ರವನ್ನು ಆರಂಭಿಸಿ,ನಂತರ ಶಾಶ್ವತ ಕಟ್ಟಡ ನಿರ್ಮಿಸಲು ಸರ್ಕಾರ ನಿರ್ದಿಷ್ಟ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ ಕಾರಣಗಳೇನು? | ಹುಮನಾಬಾದ ತಾಲ್ಲೂಕಿನ ದುಬಲಗುಂಡಿ ಹೋಬಳಿಯ ವ್ಯಾಪ್ತಿಯ ಘಾಟಬೋರಳ ಗ್ರಾಮದಲ್ಲಿ ರೈತರಿಗೆ ಅನುಕೂಲವಾಗುವಂತೆ **ಮುಂಗಾರು ಹಂಗಾಮಿನಲ್ಲಿ ಹೆಚ್ಚುವರಿ ಬಿತ್ತನೆ ಬೀಜ ವಿತರಣಾ ಕೇಂದ್ರವನ್ನು** ತೆರೆಯುವ ಮೂಲಕ ರೈತರಿಗೆ ಸ್ಥಳೀಯ ಮಟ್ಟದಲ್ಲಿ ಸೇವೆ ಒದಗಿಸುವ ಕ್ರಮವನ್ನು ಕೈಗೊಳ್ಳಲಾಗಿದೆ. |

ಸಂಖ್ಯೆ: AGRI/195/ACT/2026

P.M. Narendraswamy

**(ಪಿ. ಎಂ. ನರೇಂದ್ರ ಸ್ವಾಮಿ)**

ಕೃಷಿ ಸಚಿವರು